ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಸ್ವಾತಂತ್ರ್ಯದ ಅಮೃತ ಮಹೋತ್ಸವ
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/5411/96-97 ದಿನಾಂಕ : 23 NOV 2022

## ಸುತ್ತೋಲೆ

ವಿಷಯ: ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಟಿಪ್ಪಣಿ ಸಂಖ್ಯೆ: ಟಿಪ್ಪಣಿ ಸಂಖ್ಯೆ: ಮುಕಾ/502089/2022, ದಿನಾಂಕ: 17.11.2022.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 240 ಸೇನೆನಿ 2022, ದಿನಾಂಕ: 18.11.2022.

***

ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1 ರ ಟಿಪ್ಪಣಿ ಮತ್ತು ಉಲ್ಲೇಖ-2 ರ ಸುತ್ತೋಲೆಯಲ್ಲಿ ಸರ್ಕಾರವು ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈ ಮೂಲಕ ಎಲ್ಲಾ ನೇಮಕಾತಿ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ.

ಸರ್ಕಾರದ ಉಲ್ಲೇಖ-1 ರ ಟಿಪ್ಪಣಿ ಮತ್ತು ಉಲ್ಲೇಖ-2 ರ ಸುತ್ತೋಲೆಯ ಪ್ರತಿಯನ್ನು ಅನುಬಂಧ ಎಂದು ಲಗತ್ತಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/ನಿರ್ದೇಶಕರು(ಹಣಕಾಸು)/ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in for information of:
6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.

7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಆರ್.ಹೆಚ್.ಲಕ್ಷ್ಮೀಪತಿ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಕೆ.ಶಿವಣ್ಣ, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂ.ಸಂ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ (ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೊಮಾ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ /ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 240 ಸೇನೆನಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 18.11.2022

**ಸುತ್ತೋಲೆ**

ವಿಷಯ: ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಸೂಚನೆಗಳು.

ಉಲ್ಲೇಖ:
1. ದಿನಾಂಕ: 31.10.2022ರ ಅಧಿಸೂಚನೆ ಸಂಖ್ಯೆ: ಸಕಇ 84 ಎಸ್ ಟಿಪಿ 2021
2. ದಿನಾಂಕ:17.11.2022ರ ಟಿಪ್ಪಣಿ ಸಂಖ್ಯೆ: ಮುಕಾ/ 502089/ 2022.

*~*~*~*~*

ದಿನಾಂಕ: 31.10.2022ರ ಉಲ್ಲೇಖಿತ (1)ರಲ್ಲಿನ ಅಧಿಸೂಚನೆ ಸಂಖ್ಯೆ: ಸಕಇ 84 ಎಸ್ ಟಿಪಿ 2021ರನ್ವಯ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ 2022ರ ಉಪಬಂಧಗಳು ದಿನಾಂಕ: 01.11.2022ರಿಂದ ಜಾರಿಗೆ ಬರತಕ್ಕದ್ದೆಂದು ಗೊತ್ತುಪಡಿಸಲಾಗಿರುತ್ತದೆ.

ದಿನಾಂಕ: 17.11.2022ರ ಉಲ್ಲೇಖ (2)ರಲ್ಲಿನ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ: ಮುಕಾ/ 502/ 089/2022ರಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಎಲ್ಲಾ ನೇರ ನೇಮಕಾತಿ ಮತ್ತು ಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೀಡಲಾಗುವ ಮುಂಬಡ್ತಿ ಪ್ರಕ್ರಿಯೆಗೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸದಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ **ದಿನಾಂಕ: 01.11.2022ರ ಪೂರ್ವದಲ್ಲಿಯೇ** ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿದ್ದಲ್ಲಿ ಅಥವಾ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಂಡಿದ್ದಲ್ಲಿ ಅಂತಹ ನೇಮಕಾತಿಗಳನ್ನು ನೇರ ನೇಮಕಾತಿಗಾಗಿ ಹೊರಡಿಸಲಾಗಿದ್ದ ಅಧಿಸೂಚನೆಯನ್ವಯವೇ ಪೂರ್ಣಗೊಳಿಸುವಂತೆ ಹಾಗೂ ಮುಂಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡೆಸಿ ಮುಂಬಡ್ತಿ ಆದೇಶವನ್ನು ಹೊರಡಿಸಲು ಬಾಕಿ ಇರುವ ಪ್ರಕರಣಗಳನ್ನು ಆ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ತೀರ್ಮಾನದನ್ವಯ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ. ಮುಂದುವರೆದು, **ದಿನಾಂಕ: 01.11.2022ರಿಂದ ದಿನಾಂಕ: 17.11.2022ರ ಅವಧಿಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡೆಸಿ ನೀಡಿರುವ ಎಲ್ಲಾ ಮುಂಬಡ್ತಿ ಆದೇಶಗಳನ್ನು ತಕ್ಷಣವೇ ಹಿಂಪಡೆಯಲು** ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

ಮೇಲ್ಕಂಡ ಸೂಚನೆಗಳು ಎಲ್ಲಾ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ/ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನಪಡೆಯುವ ಸಂಸ್ಥೆಗಳಿಗೂ ಸಹ ಅನ್ವಯಿಸುತ್ತದೆ.

ವೀರಭದ್ರ 18-11-2022
(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1).

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ ಸಂಖ್ಯೆ: 31, ವಿಧಾನ ಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

<u>ಪ್ರತಿ:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು.
5. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು/ ಎಲ್ಲಾ ಜಿಲ್ಲಾಧಿಕಾರಿಗಳು/ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು.
6. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
7. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು.
8. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
9. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
13. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
14. ಸಚಿವಾಲಯದ ಎಲ್ಲಾ ಶಾಖೆಗಳು
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
16. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.
    (*ಮುಖ ಪತ್ರದೊಂದಿಗೆ)

ವಂದಿತಾ ಶರ್ಮಾ, ಭಾ.ಆ.ಸೇ.,
ಮುಖ್ಯ ಕಾರ್ಯದರ್ಶಿ
**VANDITA SHARMA, I.A.S.,**
Chief Secretary

**ಕರ್ನಾಟಕ ಸರ್ಕಾರ**
**Government of Karnataka**

ಸಂಖ್ಯೆ: ಮುಕಾ/5020891/2022 ದಿನಾಂಕ: 17.11.2022

**ಟಿಪ್ಪಣಿ**

ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ:29:ಶಾಸನ:2022: ದಿ:23.10.2022ರ ಮೂಲಕ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಆಧ್ಯಾದೇಶ, 2022ನ್ನು ದಿನಾಂಕ:01.11.2022ರಿಂದ ಜಾರಿಗೊಳಿಸಲಾಗಿರುತ್ತದೆ.

ಇದರನ್ವಯ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಅಥವಾ ಪದೋನ್ನತಿಯಲ್ಲಿ ಅನುಸೂಚಿತ ಜಾತಿಗಳಿಗೆ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ **ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಈ ಪ್ರಕ್ರಿಯೆಯು ಅಂತಿಮಗೊಂಡು ಅಧಿಕೃತವಾಗಿ ಪ್ರಕಟವಾಗುವ ವರೆಗೆ ಎಲ್ಲಾ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲು ಮತ್ತು ಮೀಸಲಾತಿ ಅನ್ವಯವಾಗುವ ವೃಂದಗಳಿಗೆ ನೀಡಲಾಗುವ ಮುಂಬಡ್ತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಆಯೋಜಿಸಬಾರದೆಂದು ಸೂಚಿಸಿದೆ.**

(ವಂದಿತಾ ಶರ್ಮಾ),
ಸರ್ಕಾರದ ಮುಖ್ಯ ಕಾರ್ಯದರ್ಶಿ

ಗೆ:
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/
ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.

ಕೊಠಡಿ ಸಂಖ್ಯೆ: 320, 3ನೇ ಮಹಡಿ, ವಿಧಾನ ಸೌಧ, ಬೆಂಗಳೂರು – 560 001, ದೂರವಾಣಿ ಕಛೇರಿ: +91-80-22252442 / 22033300 ಫ್ಯಾಕ್ಸ್: +91-80-22258913
Room No. 320, 3rd Floor, Vidhana Soudha, Bengaluru - 560 001, Phone. off. +91-80-22252442 / 22033300 Fax: +91-80-22258913
E-mail : cs@karnataka.gov.in